# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :914 (819)**
**ಮಾನ್ಯ ಸದಸ್ಯರ ಹೆಸರು** :ಡಾ: ಎಂ.ಜಿ. ಮುಳೆ (ವಿಧಾನಸಭಾ ಕ್ಷೇತ್ರ)

**ಉತ್ತರಿಸಬೇಕಾದ ದಿನಾಂಕ** :15.12.2025
**ಉತ್ತರಿಸಬೇಕಾದ ಸಚಿವರು** :ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ) | ನಗರ ಪ್ರದೇಶದಲ್ಲಿ ಆಶಾಕಾರ್ಯಕರ್ತೆಯರು ಆರೋಗ್ಯ ಮತ್ತು ನೈರ್ಮಲ್ಯದ ಬಗ್ಗೆ ಸಮುದಾಯದಲ್ಲಿ ಜಾಗೃತಿ ಮೂಡಿಸುವುದು ಸೇರಿದಂತೆ ತಾಯಿ ಮಕ್ಕಳ ಆರೋಗ್ಯ ಮತ್ತು ಮಹಿಳೆಯರಿಗೆ ಸಂಬಂಧಿಸಿದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದು, ಈ ಎಲ್ಲಾ ಅಂಶಗಳನ್ನು ಗಮನಿಸಿ ನಗರ ವ್ಯಾಪ್ತಿಯಲ್ಲಿಯೂ ಆಶಾಕಾರ್ಯಕರ್ತೆಯರನ್ನು ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ: | • ಕೇಂದ್ರ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಮಾರ್ಗಸೂಚಿಯನ್ವಯ ನಗರ ಪ್ರದೇಶದಲ್ಲಿ ದುರ್ಬಲವರ್ಗದ ಜನಸಂಖ್ಯೆಗೆ ಮಾತ್ರ ಪ್ರತಿ 2500 ಜನಸಂಖ್ಯೆಗೆ ಒಬ್ಬರಂತೆ ಆಶಾಕಾರ್ಯಕರ್ತೆಯರನ್ನು ಗುರುತಿಸಿ ಆಯ್ಕೆ ಮಾಡಬೇಕಾಗಿದೆ.<br>• ಇದರನ್ವಯ ಆರ್ಥಿಕ ಸಾಲು 2025-26 ನೇ ಸಾಲಿಗೆ ನಗರಪ್ರದೇಶಕ್ಕೆ -3329 ಆಶಾಕಾರ್ಯಕರ್ತೆಯರ ಸ್ಥಾನಗಳು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಅನುಮೋದನೆಯಾಗಿರುತ್ತದೆ.<br>• ಆಶಾಕಾರ್ಯಕರ್ತೆಯರು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯಾಗಿದ್ದು, ಸಾರ್ವಜನಿಕ ಆರೋಗ್ಯವ್ಯವಸ್ಥೆ ಮತ್ತು ಸಮುದಾಯದ ನಡುವೆ ಸ್ವಯಂ ಸೇವಾನೆಲಗಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೂರ್ಣಾವಧಿ/ ತಾತ್ಕಾಲಿಕ/ ಹೊರಗುತ್ತಿಗೆ ನೌಕರರಾಗಿರುವುದಿಲ್ಲ. ಆದ್ದರಿಂದ ಇವರಿಗೆ ನೇಮಕಾತಿ ಪ್ರಕ್ರಿಯೆ ನಡೆಸುವುದಿಲ್ಲ. ಬದಲಾಗಿ ಸ್ಥಳೀಯ ಸಮುದಾಯದಿಂದ ಗುರುತಿಸಿ ಆಯ್ಕೆ ಮಾಡಲಾಗುತ್ತದೆ. |
| ಆ) | ಇದ್ದಲ್ಲಿ, ಈ ಕುರಿತಂತೆ ಸರ್ಕಾರವು ನೇಮಕಾತಿ ಕೈಗೊಳ್ಳಲು ಕ್ರಮ ವಹಿಸುವುದೇ? | |

ಸಂಖ್ಯೆ: ಆಕುಕ 120 ಎಸ್.ಟಿ.ಕ್ಯೂ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು